# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1314 |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 29-12-2022 |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿಯವರು |

****

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಯೋಜನಾ ಪ್ರಾಧಿಕಾರಗಳ ಸಂಖ್ಯೆ ಎಷ್ಟು; | ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಆನೇಕಲ್ ಯೋಜನಾ ಪ್ರಾಧಿಕಾರ, ಬೆಂಗಳೂರು- ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಯೋಜನಾ ಪ್ರಾಧಿಕಾರ (ಭಾಗಶಃ) ಹಾಗೂ ಉಪನಗರ ವರ್ತುಲ ರಸ್ತೆ ಯೋಜನಾ ಪ್ರಾಧಿಕಾರ (ಭಾಗಶಃ) ಪ್ರದೇಶಗಳನ್ನು ಒಳಗೊಂಡಿರುತ್ತದೆ. |
| ಆ) | ಪ್ರತಿ ನಗರ ಯೋಜನಾ ಪ್ರಾಧಿಕಾರಗಳ ವ್ಯಾಪ್ತಿ ಏನು; | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲೆ ಒಳಗೊಂಡಂತೆ ಬೆಂಗಳೂರು ನಗರ ಜಿಲ್ಲೆಯಲ್ಲಿನ 543 ಗ್ರಾಮಗಳನ್ನೊಳಗೊಂಡಂತೆ 1227.48 ಚ.ಕಿ.ಮೀ ಇರುತ್ತದೆ.<br><br>ಆನೇಕಲ್ ಯೋಜನಾ ಪ್ರಾಧಿಕಾರವು ಆನೇಕಲ್ ತಾಲ್ಲೂಕಿನ 122 ಗ್ರಾಮಗಳನ್ನು ಒಳಗೊಂಡಿದ್ದು, ವಿಸ್ತೀರ್ಣವು 264.09 ಚ.ಕಿ.ಮೀ ಇರುತ್ತದೆ.<br><br>ಉಪನಗರ ವರ್ತುಲ ರಸ್ತೆ ಯೋಜನಾ ಪ್ರಾಧಿಕಾರವು (ಭಾಗಶಃ) ಆನೇಕಲ್ ತಾಲ್ಲೂಕಿನ 47 ಗ್ರಾಮಗಳನ್ನು ಒಳಗೊಂಡಿದ್ದು, ವಿಸ್ತೀರ್ಣವು 139 ಚ.ಕಿ.ಮೀ ಇರುತ್ತದೆ.<br><br>ಬೆಂಗಳೂರು ನಗರ, ರಾಮನಗರ, ಮಂಡ್ಯ ಮತ್ತು ಮೈಸೂರು ಜಿಲ್ಲೆಯ 192 ಗ್ರಾಮಗಳು ಹಾಗೂ ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯ 50 ಭಾಗಶಃ ಗ್ರಾಮಗಳು ಹಾಗೂ 22 ಪೂರ್ಣ ಗ್ರಾಮಗಳು ಬೆಂಗಳೂರು-ಮೈಸೂರು ಇನ್‌ಫ್ರಾಸ್ಟ್ರಕ್ಚರ್ ಕಾರಿಡಾರ್ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಗೆ ಒಳಪಡುತ್ತದೆ. |
| ಇ) | ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಹಲವು ಯೋಜನಾ ಪ್ರಾಧಿಕಾರಗಳನ್ನು ಒಗ್ಗೂಡಿಸಿ ಒಂದೇ ಯೋಜನಾ ಪ್ರಾಧಿಕಾರವನ್ನಾಗಿ ಮಾಡುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೆ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಒಗ್ಗೂಡಿಸಲಾಗುವುದು? | ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ನಅಇ 324 ಬಿಎಂಆರ್ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ